ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 454(532)

ಸದಸ್ಯರ ಹೆಸರು : ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 09.03.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ನಾಲ್ಕು ವರ್ಷಗಳ ಹಿಂದೆ ಬೀದರ್‌ಗೆ ಮಂಜೂರಾಗಿರುವ ಸರ್ಕಾರಿ ಇಂಜಿನೀಯರಿಂಗ್ ಕಾಲೇಜು ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಪ್ರಾರಂಭವಾಗಲಿದೆಯೇ;	ಎ.ಐ.ಸಿ.ಟಿ.ಇ ಮಾರ್ಗಸೂಚಿಯನ್ವಯ ಕಟ್ಟಡ ಕಾಮಗಾರಿಯು ಪೂರ್ಣಗೊಂಡ ನಂತರ, ಇತರೇ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಎಐಸಿಟಿಇ ಅನುಮೋದನೆ ದೊರೆತ ನಂತರ ಕಾಲೇಜನ್ನು ಪ್ರಾರಂಭಿಸಬೇಕಾಗಿರುವುದರಿಂದ, ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಕಾಲೇಜು ಪ್ರಾರಂಭ ಮಾಡಲು ಸಾಧ್ಯವಿರುವುದಿಲ್ಲ.
ಆ)	ಬೀದರ್ ಇಂಜನೀಯರಿಂಗ್ ಕಾಲೇಜು ಕಟ್ಟಡ ಕಾಮಗಾರಿ ಯಾವ ಹಂತದಲ್ಲಿದೆ;	ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಯು ಪ್ರಸ್ತುತ Structural works Completed. Block work, Flooring and plastering is in progress ಹಂತದಲ್ಲಿದ್ದು, ಕಾಮಗಾರಿಯು ಪ್ರಗತಿಯಲ್ಲಿದೆ.
ಇ)	ಬೀದರ್‌ನ ಇಂಜಿನೀಯರಿಂಗ್ ಕಾಲೇಜಿಗೆ ನೀಡಿರುವ ಅನುದಾನ ಎಷ್ಟು? (ವಿವರ ನೀಡುವುದು)	ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಈವರೆಗೂ ರಾಜ್ಯ ವಲಯದಿಂದ ರೂ. 2877.50 ಲಕ್ಷ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ರೂ.500.00 ಲಕ್ಷ ಹೀಗೆ ಒಟ್ಟು 3377.50 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಕಡತ ಸಂಖ್ಯೆ: ಇಡಿ 27 ಹೆಚ್‌ಪಿಟಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು